**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿರವರ ನ್ಯಾಯಾಲಯ, ಮೂಡಿಗೆರೆ**

**ಸಿ.ಸಿ.ನಂಃ 1617/2023**

ಪಿರ್ಯಾದಿ : ಶ್ರೀ ಜಿ.ಜಿ.ರತನ್
ಬಿನ್ ಹೆಚ್.ಡಿ. ಗೋಪಾಲ,
ವಯಸ್ಸುಃ 36 ವರ್ಷ,
ವಾಸಃ ಜಿ. ಹೊಸಹಳ್ಳಿ ಗ್ರಾಮ
ಮತ್ತು ಅಂಚೆ, ಗೋಣಿಬೀಡು
ಹೋಬಳಿ, ಮೂಡಿಗೆರೆ ತಾಲ್ಲೂಕು.

ವಿರುದ್ಧ

ಆರೋಪಿ : ಶ್ರೀ. ಶ್ರೀಮತಿ ಎಂ.ಜಿ.ಭಾನುಮತಿ
ಕೋಂ ಕಿರಣ್ ಕೆ.ಎಂ.
ವಯಸ್ಸುಃ 38 ವರ್ಷ,
ವಾಸಃ ದಾರದಹಳ್ಳಿ ಗ್ರಾಮ ಮತ್ತು
ಅಂಚೆ, ಕಡಿದಾಳು, ಕಸಬಾ ಹೋಬಳಿ,
ಮೂಡಿಗೆರೆ ತಾಲ್ಲೂಕು.

*********

ದಂಡ ಪ್ರಕ್ರಿಯಾ ಸಂಹಿತೆ ಕಲಂ **313** ರಡಿಯಲ್ಲಿ ಮಾಡಿಕೊಳ್ಳಲಾದ ಆರೋಪಿ ಹೇಳಿಕೆ

ಪ್ರಶ್ನೆ.1) ಫಿರ್ಯಾದುದಾರರ ಪರ ಹಾಜರಾದ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ

ಪ್ರಶ್ನೆ.2) ಪ್ರಾಸಾ-1 ಜಿ.ಜಿ.ರತನ್ ರವರು ತಮ್ಮ ಮುಖ್ಯ ವಿಚಾರಣೆಯಲ್ಲಿ ಆರೋಪಿಯಾದ ನೀವು ಮನೆ ಕಟ್ಟುವ ಸಲುವಾಗಿ ಪಿರ್ಯಾದಿಯಿಂದ 7,50,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದುರುತ್ತೀರಿ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.3) ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನಂತರ ಸದರಿ ಹಣವನ್ನು ಪಾವತಿ ಮಾಡುವ ಸಲುವಾಗಿ ನಿಮ್ಮ ಖಾತೆ ಹೊಂದಿರುವ ಬ್ಯಾಂಕ್ ಆಫ್ ಬರೋಡ, ಮೂಡಿಗೆರೆ ಶಾಖೆಯ ಚೆಕ್ ಸಂಖ್ಯೆಃ 000003, ದಿನಾಂಕ 22.08.2023, ರೂ.7,50,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಗೋಣಿಬೀಡು ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿರುವುದಿಲ್ಲ" (Funds insufficient) ಎಂದು ಹಿಂಬರಹದ ಮೂಲಕ ಹಿಂದಿರುಗಿಸಿರುತ್ತಾರೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.4) ಪ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನಂತರ ದಿನಾಂಕಃ 02.09.2023 ರಂದು ನಿಮಗೆ ಕಾನೂನುಬದ್ಧ ನೋಟೀಸು ನೀಡಿದ್ದು, ಸದರಿ ನೋಟೀಸನ್ನು ಸ್ವೀಕರಿಸಿದ್ದರೂ ಸಹ ಹಣವನ್ನು ಪಾವತಿ ಮಾಡಿರುವುದಿಲ್ಲ ಮತ್ತು ಆ ನೋಟೀಸಿಗೆ ಯಾವುದೇ ಉತ್ತರ ನೀಡಿರುವುದಿಲ್ಲ ಎಂದು ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನಿಮ್ಮ ಉತ್ತರವೇನು?

ಆರೋಪಿಯ ಉತ್ತರಃ

ಪ್ರಶ್ನೆ.5) ನಿಮಗೆ ಈ ಪ್ರಕರಣದ ಬಗ್ಗೆ ನ್ಯಾಯಾಲಯಕ್ಕೆ ಏನಾದರೂ ಹೇಳುವುದು ಇದೆಯೇ ?

ಆರೋಪಿಯ ಉತ್ತರಃ

ಪ್ರಶ್ನೆ.6) ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ?

ಆರೋಪಿಯ ಉತ್ತರಃ

(ಮೇಲಿನ ಸಾಕ್ಷಿದಾರರ ಎಲ್ಲಾ ಹೇಳಿಕೆಗಳನ್ನು ಶೀಘ್ರಲಿಪಿಗಾರರಿಗೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿಸಿ, ಆರೋಪಿತನಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿರುತ್ತೇನೆಂದು ದೃಢಪಡಿಸಿಕೊಳ್ಳಲಾಗಿದೆ)

sd/-

ಮೂಡಿಗೆರೆ.
ದಿನಾಂಕಃ 21.01.2026.

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಮ್ಎಫ್‌ಸಿ
ನ್ಯಾಯಾಲಯ, ಮೂಡಿಗೆರೆ.

ಆರೋಪಿಯ ಸಹಿಃ